# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 01 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1141 (1335) |
| 02 | ಸದಸ್ಯರ ಹೆಸರು | : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 03 | ಉತ್ತರಿಸುವ ದಿನಾಂಕ | : 21.12.2018 |
| 04 | ಉತ್ತರಿಸುವ ಸಚಿವರು | : ಗೃಹ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಮಾರತ್‌ಹಳ್ಳಿ, ಜಕ್ಕಸಂದ್ರ, ಸರ್ಜಾಪುರ, ಬೆಳ್ಳಂದೂರು, ದೇವರ ಬೀಸನಹಳ್ಳಿ, ಕಾಡು ಬೀಸನಹಳ್ಳಿ ಮುಂತಾದ ಕಡೆಗಳಲ್ಲಿ ಅಕ್ರಮವಾಗಿ ದೇಶ ಪ್ರವೇಶಿಸಿ ವಾಸಿಸುತ್ತಿರುವ ಬಾಂಗ್ಲಾದೇಶಿಯರ ಕ್ಯಾಂಪ್‌ಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ಬೆಂಗಳೂರು ನಗರದ ವೈಟ್‌ಫಿಲ್ಡ್ ವಿಭಾಗದ ವ್ಯಾಪ್ತಿಗೆ ಒಳಪಡುವ ಮಾರತ್‌ಹಳ್ಳಿ, ಸರ್ಜಾಪುರ ರಸ್ತೆ, ಬೆಳ್ಳಂದೂರು, ದೇವರ ಬೀಸನಹಳ್ಳಿ, ಕಾಡು ಬೀಸನಹಳ್ಳಿ ಹಾಗೂ ಇನ್ನಿತರ ಪ್ರದೇಶಗಳಲ್ಲಿ ಅಕ್ರಮವಾಗಿ ವಾಸ ಮಾಡುತ್ತಿರುವ ಬಾಂಗ್ಲಾದೇಶಿಯರನ್ನು ಗುರುತಿಸಲು ತಹಶೀಲ್ದಾರ್ ಕಚೇರಿಯ ಅಧಿಕಾರಿಗಳು ಹಾಗೂ ಬಿಬಿಎಂಪಿ ಅಧಿಕಾರಿಗಳನ್ನೊಳಗೊಂಡ ಸಭೆಯನ್ನು ದಿನಾಂಕ: 04.01.2018ರಂದು ಉಪ ಪೊಲೀಸ್ ಆಯುಕ್ತರು, ವೈಟ್‌ಫಿಲ್ಡ್ ವಿಭಾಗದ ಕಚೇರಿಯಲ್ಲಿ ಸಭೆ ನಡೆಸಿ ಬಾಂಗ್ಲಾದೇಶಿಯರನ್ನು ಗುರುತಿಸಲು ಕ್ರಮ ಕೈಗೊಳ್ಳಲು ಸೂಕ್ತ ಸೂಚನೆಗಳನ್ನು ನೀಡಲಾಗಿರುತ್ತದೆ ಸರ್ಕಾರದ ಪತ್ರ ಸಂಖ್ಯೆ: ಒಇ/೧೭/ಪಿಬಿಡಿ/2015, ದಿನಾಂಕ: 01.01.2016ರ ಆದೇಶದಂತೆ, ಬೆಂಗಳೂರು ನಗರದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ವಾಸವಿರುವ ಬಾಂಗ್ಲಾ ವಲಸಿಗರನ್ನು ಪತ್ತೆ ಹಚ್ಚಿ ಗಡಿಪಾರು ಮಾಡುವ ಸಲುವಾಗಿ Special Task Force ಅನ್ನು ರಚಿಸಿ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | ಬೆಂಗಳೂರು ನಗರದಲ್ಲಿ ವಾಸಿಸುತ್ತಿರುವ ಅಕ್ರಮ ವಲಸಿಗರಾದ ಬಾಂಗ್ಲಾದೇಶಿಗಳು ಸರ್ಕಾರದ ಸೌಲಭ್ಯಗಳನ್ನು ಅನಧಿಕೃತವಾಗಿ ಬಳಸುತ್ತಿದ್ದು ಇದಕ್ಕೆ ಯಾವುದೇ ರೀತಿಯ ತೆರಿಗೆ ಪಾವತಿಸುತ್ತಿಲ್ಲವಾದ್ದರಿಂದ ಕನ್ನಡಿಗರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಕಂಡುಬಂದಲ್ಲಿ ಸೂಕ್ತ ಕಾನೂನುಕ್ರಮ ಕೈಗೊಳ್ಳಲಾಗುವುದು. |
| ಇ) | ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿಯರು ಸ್ಥಳೀಯವಾಗಿ ಲಭ್ಯವಿರುವ ಶ್ರಮಜೀವಿ ಕೆಲಸಗಳನ್ನು ಕಡಿಮೆ ಕೂಲಿಗೆ ಮಾಡುತ್ತಿರುವುದರಿಂದ ಕನ್ನಡಿಗರಿಗೆ ಸಣ್ಣಪುಟ್ಟ ಕೆಲಸಗಳು ಲಭ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |

<table>
<tr>
<td>ಈ)</td>
<td>ಅಕ್ರಮ ವಲಸಿಗರು ಬೆಂಗಳೂರಿನಲ್ಲಿ ನೆಲೆಸಿ ಕೊಲೆ ದರೋಡೆ ಮತ್ತಿತರ ಪ್ರಕರಣಗಳನ್ನು ನಡೆಸಿ ಬಳಿಕ ತಮ್ಮ ತವರಿಗೆ ಹೋಗುತ್ತಿರುವುದರಿಂದ ಹಲವಾರು ಕೊಲೆ ಪ್ರಕರಣಗಳು ಇದುವರೆಗೂ ಪತ್ತೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅಕ್ರಮ ಬಾಂಗ್ಲಾ ವಲಸಿಗರ ಬಗ್ಗೆ ಸರ್ಕಾರದ ನಿಲುವೇನು?</td>
<td>ಬೆಂಗಳೂರು ನಗರದ ಪೊಲೀಸ್ ಠಾಣೆಗಳಲ್ಲಿ ಕಳೆದ ಮೂರು ವರ್ಷಗಳ್ಲಿ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವ ಬಾಂಗ್ಲಾದೇಶಿಯರ ವಿರುದ್ಧ ಒಟ್ಟು ೩೭ ಪ್ರಕರಣಗಳನ್ನು ದಾಖಲಿಸಿದ್ದು, ಪೊಲೀಸ್ ಠಾಣಾ ವಿವರಗಳನ್ನು ಅನುಬಂಧ-ಅ ದಲ್ಲಿ ನೀಡಲಾಗಿದೆ. ವರ್ಷವಾರು ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ.</th><th>ವರ್ಷ</th><th>ದಾಖಲಾದ ಪ್ರಕರಣಗಳ ಸಂಖ್ಯೆ</th></tr>
<tr><td>1</td><td>2016</td><td>16</td></tr>
<tr><td>2</td><td>2017</td><td>6</td></tr>
<tr><td>3</td><td>2018</td><td>15</td></tr>
<tr><td></td><td>ಒಟ್ಟು</td><td>37</td></tr>
</table>
</td>
</tr>
</table>

ಸಂಖ್ಯೆ: ಒಇ 219 ಪಿಎಂಎಸ್ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು